ಚಿಕ್ಕಬಳ್ಳಾಪುರ ಪಟ್ಟಣಕ್ಕೆ ಕುಡಿಯುವ ನೀರು ಪೂರೈಕೆ

1107 (1299) ಶ್ರೀ ಶಿವಶಂಕರ ರೆಡ್ಡಿ ಎನ್. ಹೆಚ್ (ಗೌರಿಬಿದನೂರು) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

1. ಚಿಕ್ಕಬಳ್ಳಾಪುರ ಪಟ್ಟಣಕ್ಕೆ ಕುಡಿಯುವ ನೀರು ಪೂರೈಕೆಯಾಗುತ್ತಿರುವ ಜಕ್ಕಲಮಡಗು ಜಲಾಶಯದಿಂದ ಗೌರಿಬಿದನೂರು ಹಾಗೂ ದೊಡ್ಡ ಬಳ್ಳಾಪುರ ಪಟ್ಟಣಗಳಿಗೆ ಕುಡಿಯುವ ನೀರು ಪೂರೈಸುವ ಯೋಜನೆಯು ಸರ್ಕಾರದ ಯಾವ ಹಂತದಲ್ಲಿದೆ.

2. ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ ರವರು ಈಗಾಗಲೇ ಈ ಯೋಜನೆಗೆ ಸಂಬಂಧಪಟ್ಟಂತೆ ಸಲ್ಲಿಸಿರುವ ವಿವರವಾದ ಯೋಜನಾ ವರದಿಯನ್ನು ಸರ್ಕಾರವು ಪರಿಶೀಲಿಸುತ್ತಿದೆಯೇ ? ಇಲ್ಲವಾದಲ್ಲಿ ಈ ಯೋಜನೆಯನ್ನು ಸರ್ಕಾರವು ಯಾವಾಗ ಕೈಗೆತ್ತಿಕೊಳ್ಳಲಿದೆ ?

ಶ್ರೀ ಬಿ. ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು)

1. ಜಕ್ಕಲಮಡಗು ಜಲಾಶಯದಿಂದ ಚಿಕ್ಕಬಳ್ಳಾಪುರ ದೊಡ್ಡಬಳ್ಳಾಪುರ ಮತ್ತು ಗೌರಿಬಿದನೂರು ಪಟ್ಟಣ ಪ್ರದೇಶಗಳಿಗೆ ಶಾಶ್ವತ ನೀರು ಸರಬರಾಜು ಯೋಜನೆಯನ್ನು ಜಂಟಿಯಾಗಿ ಕಾರ್ಯಗತಗೊಳಿಸಲು ರೂ. 52.00 ಕೋಟಿಯ ಪ್ರಸ್ತಾವನೆಯು ಸರ್ಕಾರದಲ್ಲಿ ಪರಿಶೀಲನಾ ಹಂತದಲ್ಲಿದೆ.

2. ವಿವರವಾದ ಯೋಜನಾ ವರದಿಯನ್ನು ಸರ್ಕಾರವು ಪರಿಶೀಲಿಸುತ್ತಿದೆ. ಈ ಯೋಜನೆಗೆ ಸರ್ಕಾರವು ತಾತ್ವಿಕ ಅನುಮೋದನೆ ನೀಡಿದ ನಂತರ ವಿವರವಾದ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ, ಸೂಕ್ತವಾದ ಆರ್ಥಿಕ ಸಂಸ್ಥೆಗಳಿಂದ ನೆರವು ದೊರೆತ ನಂತರ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು

ಬೆಂಗಳೂರಿನ ಸಜ್ಜನ್ ರಾವ್ ವೃತ್ತದ ನಿವಾಸಿಗಳಿಗೆ ಸ್ವಚ್ಛತೆ ಕಲ್ಪಿಸಿಕೊಡುವುದು

1108 (1231) ಶ್ರೀ ಕೆ.ಎನ್. ಸುಬ್ಬಾರೆಡ್ಡಿ (ಬಸವನಗುಡಿ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬೆಂಗಳೂರು ನಗರದ ಸಜ್ಜನ್ ರಾವ್ ವೃತ್ತದಲ್ಲಿ ಕಾರ್ಪೋರೇಷನ್ ಆಸ್ಪತ್ರೆಯ ವಸತಿಗೃಹಗಳ ಹಿಂಭಾಗದಲ್ಲಿ ಇರುವ ರೋಶನ್ ಬಾಗ್ ರಸ್ತೆಯಲ್ಲಿ ವಾಸ ಮಾಡುತ್ತಿರುವನಿವಾಸಿಗಳಿಗೆ ಸದರಿ ವಸತಿ ಗೃಹಗಳ ಕೊಳಚೆನೀರು ಹಾಗೂ ಅದೇ ರಸ್ತೆಯಲ್ಲಿ ಇರುವ ಬಾರ್ ಮತ್ತು ರೆಸ್ಟೋರೆಂಟ್ ಜಾಗದಲ್ಲಿ ಸಾರ್ವಜನಿಕರು ಮಲಮೂತ್ರ ವಿಸರ್ಜನೆ ಮಾಡಿರುವಲ್ಲಿನ ನಿವಾಸಿಗಳಿಗೆ ಬಾರಿ ಕಿರಿ ಕಿರಿ ಉಂಟಾಗಿರುವ ವಿಚಾರವು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಈ ಬಗ್ಗೆ ಈಗಾಗಲೇ ಹಲವಾರು ಬಾರಿ ದೂರುಗಳು ಬಂದಿದ್ದರೂ ಸಹ ಈ ದಿಸೆಯಲ್ಲಿ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣಗಳೇನು ?

ಶ್ರೀ ಎಸ್. ಎಂ. ಕೃಷ್ಣ (ಮುಖ್ಯಮಂತ್ರಿಗಳು)

ಅ) ಬಂದಿದೆ. ಕೊಳೆದ ನೀರು (ಕೊಳಚೆ) ಸೋರುವಿಕೆಯನ್ನು ಸರಿಪಡಿಸಲು ಒಳಚರಂಡಿ ಮಂಡಳಿಗೆ ಒಳಚರಂಡಿಕೊಳವೆಗಳನ್ನು ಬದಲಾಯಿಸಲು ಕ್ರಮ ಕೈಗೊಳ್ಳಲು ತಿಳಿಸಲಾಗಿದೆ. ಅಲ್ಲದೆ ಈ ಪ್ರದೇಶದಲ್ಲಿ ಪ್ರತಿದಿನವು ಸ್ವಚ್ಛಗೊಳಿಸಿ ಕ್ರಿಮಿನಾಶಕವನ್ನು ಸಿಂಪಡಿಸಲಾಗುತ್ತಿದೆ.